# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 692

**ಸದಸ್ಯರ ಹೆಸರು** : ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

**ಉತ್ತರಿಸುವ ದಿನಾಂಕ** : 13.12.2024

**ಉತ್ತರಿಸುವ ಸಚಿವರು** : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕನ್ನಡಕ್ಕೆ ಶಾಸ್ತ್ರೀಯ ಭಾಷಾ ಸ್ಥಾನಮಾನ ದೊರೆತ ಬಳಿಕ ಸ್ಥಾಪಿಸಲಾದ ಶಾಸ್ತ್ರೀಯ ಅಧ್ಯಯನ ಕೇಂದ್ರವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ನಿರ್ಲಕ್ಷಿಸುತ್ತಿವೆಯೇ; | ಕನ್ನಡಕ್ಕೆ ಶಾಸ್ತ್ರೀಯ ಭಾಷಾ ಸ್ಥಾನಮಾನವು ದಿನಾಂಕ:31.10.2008ರಲ್ಲಿ ದೊರೆತಿದ್ದು, ಭಾರತೀಯ ಭಾಷಾ ಸಂಸ್ಥಾನದ ಅಧೀನದಲ್ಲಿ 2015 ರಿಂದ ಕೇಂದ್ರದ ಕಚೇರಿ ಕಾರ್ಯಾರಂಭ ಮಾಡಿದೆ. ಕೇಂದ್ರ ಸರ್ಕಾರದ ಆದೇಶದ ಮೇರೆಗೆ ಮೈಸೂರು ವಿಶ್ವವಿದ್ಯಾನಿಲಯದ ಎನ್.ಸಿ.ಎಚ್.ಎಸ್ ಮೊದಲನೇ ಮಹಡಿಯಲ್ಲಿ ತಾತ್ಕಾಲಿಕ ಕಟ್ಟಡದ ವ್ಯವಸ್ಥೆ ಕಲ್ಪಿಸಲಾಗಿದ್ದು, ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಈಗಾಗಲೇ ಮೈಸೂರು ವಿಶ್ವವಿದ್ಯಾನಿಲಯ ಒದಗಿಸಿರುವ 4 ಎಕರೆ 2 ಗುಂಟೆ ಖಾಲಿ ನಿವೇಶನವು ಕೇಂದ್ರದ ಹೆಸರಿಗೆ ನೋಂದಣಿ (Registration) ಮಾಡಿಸಲು ಕ್ರಮವಹಿಸಲಾಗುತ್ತಿದೆ.<br><br>ತಾತ್ಕಾಲಿಕವಾಗಿ ಮೈಸೂರು ವಿಶ್ವವಿದ್ಯಾನಿಲಯದ ಮಾನಸ ಗಂಗೋತ್ರಿ ಆವರಣದಲ್ಲಿರುವ ಜಯಲಕ್ಷ್ಮಿ ವಿಲಾಸ ಅರಮನೆ ಕಟ್ಟಡದಲ್ಲಿ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಸ್ಥಾಪಿಸಲು ಎಂ.ಓ.ಯು ಮಾಡಿಕೊಳ್ಳಲಾಗಿರುತ್ತದೆ.<br><br>ಪ್ರಸ್ತುತ ಜಯಲಕ್ಷ್ಮಿ ವಿಲಾಸ ಕಟ್ಟಡವು ನವೀಕರಣಗೊಳ್ಳುವುದರಿಂದ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ದೈನಂದಿನ ಕಾರ್ಯಗಳು ನಡೆಯಲು ಮೈಸೂರು ವಿಶ್ವವಿದ್ಯಾನಿಲಯದ ಎನ್.ಸಿ.ಎಚ್.ಎಸ್ ಕಟ್ಟಡದ ಮೊದಲನೇ ಮಹಡಿಯಲ್ಲಿ ತಾತ್ಕಾಲಿಕ ಕಟ್ಟಡದ ವ್ಯವಸ್ಥೆಯನ್ನು ಮಾಡಲಾಗಿದೆ. |

| | | |
|---|---|---|
| (ಆ) | ನಿರ್ಲಕ್ಷಿಸದಿದ್ದಲ್ಲಿ ಈವರೆಗೆ ಶಾಸ್ತ್ರೀಯ ಅಧ್ಯಯನ ಕೇಂದ್ರಕ್ಕೆ ಸ್ವಂತ ನೆಲೆ ಒದಗಿಸದಿರಲು ಕಾರಣಗಳೇನು; | ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಈಗಾಗಲೇ ಮೈಸೂರು ವಿಶ್ವವಿದ್ಯಾನಿಲಯ ಒದಗಿಸಿರುವ 4 ಎಕರೆ 2 ಗುಂಟೆ ಖಾಲಿ ನಿವೇಶನವನ್ನು ಕೇಂದ್ರದ ಹೆಸರಿಗೆ ನೋಂದಣಿ (Registration) ಮಾಡಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಭಾಷೆಯ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅವಶ್ಯವಿರುವ ಅನುದಾನಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅಲೆದಾಟ ನಡೆದಿರುವುದು ನಿಜವೇ; ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರದ ಕ್ರಮವೇನು? | ಶಾಸ್ತ್ರೀಯ ಕನ್ನಡ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ 2024-25ನೇ ಸಾಲಿನಲ್ಲಿ ರೂ.86,00,000/- ಅನುದಾನ ಬಂದಿದ್ದು, ಇದರಿಂದ ಆಂತರಿಕ ಮತ್ತು ಬಾಹ್ಯ ಸಂಶೋಧನಾ ಯೋಜನೆಗಳು, ಹಳಗನ್ನಡ ಓದು – ಅಧ್ಯಯನ ಕಾರ್ಯಾಗಾರಗಳು, ಶಾಸ್ತ್ರೀಯ ಕನ್ನಡಕ್ಕೆ ಸಂಬಂಧಿಸಿದಂತೆ ವಿಚಾರ ಸಂಕಿರಣಗಳು, ತರಬೇತಿ ಶಿಬಿರಗಳು, ವೆಬಿನಾರ್ ಗಳು, ಹಳೆಗನ್ನಡ ಭಾಷೆಯನ್ನು ಪ್ರೋತ್ಸಾಹಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>ಮೈಸೂರು ವಿಶ್ವವಿದ್ಯಾಲಯವು ಕೇಂದ್ರದ ಕೆಲಸ ಕಾರ್ಯಗಳಿಗೆ ತಾತ್ಕಾಲಿಕ ಕಟ್ಟಡದ ವ್ಯವಸ್ಥೆ ಕಲ್ಪಿಸಿದೆ ಹಾಗೂ ಕೇಂದ್ರಕ್ಕೆ 4 ಎಕರೆ 2 ಗುಂಟೆ ಜಾಗವನ್ನು ನೀಡಿದೆ. |

**ಸಂಖ್ಯೆ**.ಕಸಂವಾ 141 ಕೆಓಎಲ್ ಆಕ 2024

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು